**All India Radio: Bangalore**
**National Bulletin In Kannada**
**06.02.2026 1.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**06.02.2026 1.10 p.m.**
**<><><><>**

ಮುಖ್ಯಾಂಶಗಳು

1. ೯ನೇ ಆವೃತ್ತಿಯ ಪರೀಕ್ಷಾ ಪೇ ಚರ್ಚಾ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದ ಪ್ರಧಾನಿ ನರೇಂದ್ರ ಮೋದಿ
2. ರೆಪೊ ದರವನ್ನು ಶೇಕಡ ೫.೨೫ರ ಯಥಾಸ್ಥಿತಿಯಲ್ಲಿಡಲು ನಿರ್ಧರಿಸಿದ ಭಾರತೀಯ ರಿಸರ್ವ್ ಬ್ಯಾಂಕ್
3. ಮಲೇಷಿಯಾಕ್ಕೆ ನಾಳೆಯಿಂದ ಎರಡು ದಿನಗಳ ಭೇಟಿ ನೀಡಲಿರುವ ಪ್ರಧಾನಿ ನರೇಂದ್ರ ಮೋದಿ; ಆದ್ಯತೆಯ ಕ್ಷೇತ್ರಗಳಲ್ಲಿ ಮಹತ್ವದ ಚರ್ಚೆಗೆ ಒತ್ತು
4. ಅಮೃತ್ ಭಾರತ್ ಯೋಜನೆಯಡಿಯಲ್ಲಿ ೧೬೦ ರೈಲು ನಿಲ್ದಾಣಗಳ ಪುನರಾಭಿವೃದ್ಧಿ ಕಾರ್ಯ ಪೂರ್ಣ - ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್
5. ಹತ್ತೊಂಭತ್ತು ವರ್ಷದೊಳಗಿನವರ ವಿಶ್ವಕಪ್ ಕ್ರಿಕೆಟ್; ಪ್ರಶಸ್ತಿಗಾಗಿ ಭಾರತ ಮತ್ತು ಇಂಗ್ಲೆಂಡ್ ತಂಡ ಹಣಾಹಣಿ

<><><><>

ಪರೀಕ್ಷಾ ಪೆ ಚರ್ಚಾದ ೯ನೇ ಆವೃತ್ತಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ಪ್ರಧಾನಿಯವರು ಪರೀಕ್ಷೆಯ ಸಮಯದಲ್ಲಿ ಒತ್ತಡ ಮತ್ತು ಆತಂಕವನ್ನು ಹೇಗೆ ನಿವಾರಿಸುವುದು ಎಂಬುದರ ಕುರಿತು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು. ವಿದ್ಯಾರ್ಥಿಗಳು ತಮ್ಮದೇ ಆದ ವಿಶಿಷ್ಟ ಕಲಿಕಾ ಮಾದರಿಗಳನ್ನು ನಂಬುವಂತೆ ಅವರು ಸಲಹೆ ನೀಡಿದರು. ಯಾವುದೇ ಇಬ್ಬರು ವ್ಯಕ್ತಿಗಳು ಒಂದೇ ರೀತಿಯಲ್ಲಿ ಯೋಚಿಸುವುದಿಲ್ಲ ಅಥವಾ ಬೆಳೆಯುವುದಿಲ್ಲ. ಪ್ರತಿಯೊಬ್ಬ ವಿದ್ಯಾರ್ಥಿಗೂ ವಿಶಿಷ್ಟ ಶೈಲಿ ಇರುತ್ತದೆ ಮತ್ತು ಒಬ್ಬರ ಸ್ವಂತ ತಯಾರಿ ಮಾದರಿಯಲ್ಲಿ ಪೂರ್ಣ ನಂಬಿಕೆ ಇರುವುದು ಮುಖ್ಯ. ಅದೇ ಸಮಯದಲ್ಲಿ, ವಿದ್ಯಾರ್ಥಿಗಳು ಶಿಕ್ಷಕರು, ಪೋಷಕರು ಮತ್ತು ಮಾರ್ಗದರ್ಶಕರು ನೀಡುವ ಸಲಹೆಗಳನ್ನು ಎಚ್ಚರಿಕೆಯಿಂದ ಆಲಿಸಬೇಕು ಮತ್ತು ಅವುಗಳನ್ನು ಆಳವಾಗಿ ಅರ್ಥಮಾಡಿಕೊಳ್ಳಬೇಕು ಮತ್ತು ನಂತರ ಉಪಯುಕ್ತವಾದದ್ದನ್ನು ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಇತರರನ್ನು ಕುರುಡಾಗಿ ನಕಲಿಸುವ ಬದಲು, ಅವರು ಸ್ವೀಕರಿಸುವ ಯಾವುದೇ ಸಲಹೆಗೆ ತಮ್ಮದೇ ಆದ ಅನುಭವಗಳು ಮತ್ತು ಸ್ವಯಂ ತಿಳುವಳಿಕೆಯನ್ನು ಹೊಂದಲು ಪ್ರಧಾನಿ ವಿದ್ಯಾರ್ಥಿಗಳಿಗೆ ಕರೆ ನೀಡಿದರು. ವಿದ್ಯಾರ್ಥಿಗಳು ಮಾರ್ಗದರ್ಶನವನ್ನು ಆತ್ಮ ವಿಶ್ವಾಸದೊಂದಿಗೆ ಸಂಯೋಜಿಸಿದಾಗ ನಿಜವಾದ ಆತ್ಮವಿಶ್ವಾಸ ಬರುತ್ತದೆ ಎಂದು ಅವರು ಹೇಳಿದರು.

****ಧ್ವನಿ****ಪ್ರಧಾನಿ

ಶಿಕ್ಷಕರು ಪ್ರತಿಯೊಬ್ಬ ವಿದ್ಯಾರ್ಥಿಯ ಕಲಿಕೆಯ ವೇಗಕ್ಕೆ ಸೂಕ್ಷ್ಮವಾಗಿರಬೇಕು ಎಂದು ಪ್ರಧಾನಿ ಸಲಹೆ ನೀಡಿದರು. ಒಬ್ಬ ಶಿಕ್ಷಕ ವಿದ್ಯಾರ್ಥಿಗಿಂತ ಒಂದು ಹೆಜ್ಜೆ ಮುಂದೆ ಇರಬೇಕು ಮತ್ತು ಹೆಚ್ಚು ದೂರವಿರಬಾರದು, ಇದರಿಂದ ಮಾರ್ಗದರ್ಶನವನ್ನು ಸಾಧಿಸಬಹುದಾಗಿದೆ ಎಂದು ಅವರು ಹೇಳಿದರು. ಖಚಿತವಾದ ಮಾರ್ಗದರ್ಶಿಗಳು, ಪ್ರಮುಖ ಪ್ರಶ್ನೆ ಪುಸ್ತಕಗಳು ಅಥವಾ ಪ್ರಶ್ನೆ ಬ್ಯಾಂಕ್‌ಗಳನ್ನು ಮಾತ್ರ ಅವಲಂಬಿಸುವಂತಹ ತಪ್ಪು ತಯಾರಿ ವಿಧಾನಗಳನ್ನು ಅಳವಡಿಸಿಕೊಳ್ಳದಂತೆ ವಿದ್ಯಾರ್ಥಿಗಳಿಗೆ ಪ್ರಧಾನಿ ನರೇಂದ್ರ ಮೋದಿ ಎಚ್ಚರಿಕೆ ನೀಡಿದರು. ಉತ್ತಮ ಶಿಕ್ಷಕರು ಸಂಪೂರ್ಣ ಪಠ್ಯಕ್ರಮದ ಮೇಲೆ ಕೇಂದ್ರೀಕರಿಸುತ್ತಾರೆ, ಕಠಿಣ ಪರಿಶ್ರಮವನ್ನು ಪ್ರೋತ್ಸಾಹಿಸುತ್ತಾರೆ ಮತ್ತು ವಿದ್ಯಾರ್ಥಿಗಳು ತಾವು ಕಲಿಯುವ ವಿಷಯಗಳ ನೈಜ-ಜೀವನದ ಅನ್ವಯಗಳನ್ನು ಅರ್ಥಮಾಡಿಕೊಳ್ಳಲು ಸಹಾಯ ಮಾಡುತ್ತಾರೆ, ಪರೀಕ್ಷಾ-ಆಧಾರಿತ ಕಲಿಕೆಗಿಂತ ಸಮಗ್ರ ಅಭಿವೃದ್ಧಿಯನ್ನು ಖಚಿತಪಡಿಸಿಕೊಳ್ಳುತ್ತಾರೆ ಎಂದು ಅವರು ಹೇಳಿದರು. ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ಪರೀಕ್ಷಾ ಪೆ ಚರ್ಚಾ ವಿವಿಧ ವಯೋಮಾನದ ಕೋಟ್ಯಂತರ ಯುವಜನತೆಗೆ ಸ್ಫೂರ್ತಿ ನೀಡುತ್ತದೆ ಎಂದು ಹೇಳಿದ್ದಾರೆ. ನವದೆಹಲಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಅವರ ವಿದ್ಯಾರ್ಥಿಗಳ ಜೊತೆಗಿನ ಸಂವಾದವು ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ, ಅವರ ಆಲೋಚನೆಗಳನ್ನು ಹಂಚಿಕೊಳ್ಳಲು ಪ್ರೋತ್ಸಾಹಿಸುತ್ತದೆ ಮತ್ತು ಸಮಗ್ರ ಅಭಿವೃದ್ಧಿಯ ವಿಶಿಷ್ಟ ಉಪಕ್ರಮದತ್ತ ಅವರನ್ನು ಕರೆದೊಯ್ಯುತ್ತದೆ ಎಂದು ಹೇಳಿದರು.

<><><><>

ಭಾರತೀಯ ರಿಸರ್ವ್ ಬ್ಯಾಂಕ್ ರೆಪೊ ದರವನ್ನು ಶೇಕಡ ೫.೨೫ ರಲ್ಲಿ ಯಥಾಸ್ಥಿತಿಯಲ್ಲಿಡಲು ನಿರ್ಧರಿಸಿದೆ. ಪ್ರಸಕ್ತ ಹಣಕಾಸು ವರ್ಷದ ಆರನೇ ಮತ್ತು ಅಂತಿಮ ದ್ವೈಮಾಸಿಕ ಹಣಕಾಸು ನೀತಿಯನ್ನು ಪ್ರಕಟಿಸಿದ ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ, ಹಣಕಾಸು ನೀತಿ ಸಮಿತಿ - ಎಂಪಿಸಿ ನೀತಿ ರೆಪೊ ದರವನ್ನು ಶೇಕಡ ೫.೨೫ರಲ್ಲಿ ಯಥಾಸ್ಥಿತಿಯಲ್ಲಿಡಲು ಸರ್ವಾನುಮತದಿಂದ ನಿರ್ಧರಿಸಿದೆ ಎಂದು ಹೇಳಿದ್ದಾರೆ. ಇದರ ಪರಿಣಾಮವಾಗಿ ಇತರ ದರಗಳು ಸಹ ಬದಲಾಗುವುದಿಲ್ಲ. ಡಿಸೆಂಬರ್ ೨೦೨೫ ರಲ್ಲಿ ಆರ್‌ಬಿಐ ರೆಪೊ ದರವನ್ನು ೨೫ ಬೇಸಿಸ್ ಪಾಯಿಂಟ್‌ಗಳಿಂದ ಕಡಿಮೆ ಮಾಡಿತ್ತು. ಆರ್‌ಬಿಐ ೨೦೨೬-೨೭ರ ಮೊದಲ ತ್ರೈಮಾಸಿಕದಲ್ಲಿ ಸಿಪಿಐ ಹಣದುಬ್ಬರದ ಮುನ್ನೋಟವನ್ನು ಶೇಕಡ ೪ಕ್ಕೆ ಮತ್ತು ಎರಡನೇ ತ್ರೈಮಾಸಿಕದಲ್ಲಿ ೪.೨ಕ್ಕೆ ಪರಿಷ್ಕರಿಸಿದೆ. ಡಿಸೆಂಬರ್‌ನಲ್ಲಿ ಕೇಂದ್ರ ಬ್ಯಾಂಕ್ ಇದನ್ನು ಕ್ರಮವಾಗಿ ಶೇಕಡ ೩.೯ ಮತ್ತು ಶೇಕಡ ೪.೦ ಎಂದು ಅಂದಾಜಿಸಿದೆ. ಹಣದುಬ್ಬರದ ಮುನ್ನೋಟದಲ್ಲಿ ಸ್ವಲ್ಪ ಏರಿಕೆಯಾಗಲು ಪ್ರಾಥಮಿಕವಾಗಿ ಅಮೂಲ್ಯ ಲೋಹಗಳ ಬೆಲೆಗಳಲ್ಲಿನ ಹೆಚ್ಚಳವೇ ಕಾರಣ ಎಂದು ಅವರು ಹೇಳಿದ್ದಾರೆ. ಇದು ಸುಮಾರು ೬೦ ರಿಂದ ೭೦ ಬೇಸಿಸ್ ಪಾಯಿಂಟ್‌ಗಳಿಗೆ ಕೊಡುಗೆ ನೀಡುತ್ತದೆ. ಅನಧಿಕೃತ ಎಲೆಕ್ಟ್ರಾನಿಕ್ ಬ್ಯಾಂಕಿಂಗ್ ವಹಿವಾಟುಗಳಲ್ಲಿ ಗ್ರಾಹಕರ ಹೊಣೆಗಾರಿಕೆಯನ್ನು ಸೀಮಿತಗೊಳಿಸುವ ಕುರಿತು ಕರಡು ಮಾರ್ಗಸೂಚಿಗಳನ್ನು ಹೊರಡಿಸಲು ಆರ್‌ಬಿಐ ಪ್ರಸ್ತಾಪಿಸಿದೆ. ಈ ಮಾರ್ಗಸೂಚಿಗಳ ಅಡಿಯಲ್ಲಿ, ಸಣ್ಣ ಮೌಲ್ಯದ ವಂಚನೆಯ ವಹಿವಾಟುಗಳಲ್ಲಿ ಉಂಟಾದ ನಷ್ಟಕ್ಕೆ ೨೫೦೦೦ ರೂಪಾಯಿಗಳವರೆಗಿನ ಗ್ರಾಹಕರಿಗೆ ಪರಿಹಾರ ನೀಡಲು ಆರ್‌ಬಿಐ ಒಂದು ಚೌಕಟ್ಟನ್ನು ಪರಿಚಯಿಸಲು ಯೋಜಿಸುತ್ತಿದೆ ಎಂದು ಅವರು ಹೇಳಿದ್ದಾರೆ.

<><><><>

ಮಲೇಷಿಯಾ ಪ್ರಧಾನಿ ಅನ್ವರ್ ಇಬ್ರಾಹಿಂ ಅವರ ಆಹ್ವಾನದ ಮೇರೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ನಾಳೆ ಮತ್ತು ನಾಡಿದ್ದು ಕೌಲಾಲಂಪುರ ಭೇಟಿ ನೀಡಲಿದ್ದಾರೆ. ಈ ಕುರಿತು ಮಾಹಿತಿ ನೀಡಿದ ವಿದೇಶಾಂಗ ಸಚಿವಾಲಯದ ಕಾರ್ಯದರ್ಶಿ ಪಿ.ಕುಮಾರನ್, ಇದು ಪ್ರಧಾನಿ ನರೇಂದ್ರ ಮೋದಿ ಅವರ ಮೂರನೇ ಮಲೇಷಿಯಾ ಭೇಟಿಯಾಗಿದೆ. ಈ ಭೇಟಿಯು ಆಸಿಯಾನ್ ಪ್ರದೇಶದೊಂದಿಗೆ ಸಂಬಂಧವನ್ನು ಬಲಗೊಳಿಸಲು ಅವಕಾಶ ಒದಗಿಸುತ್ತದೆ ಎಂದು ಹೇಳಿದರು. ಭೇಟಿಯ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ಮಲೇಷಿಯಾ ಪ್ರಧಾನಿ ಅನ್ವರ್ ಇಬ್ರಾಹಿಂ ಅವರೊಂದಿಗೆ ದ್ವಿಪಕ್ಷೀಯ ಚರ್ಚೆ ನಡೆಸಲಿದ್ದಾರೆ. ಅಲ್ಲದೇ, ಭಾರತ-ಮಲೇಷಿಯಾ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯಡಿ ಪ್ರಗತಿ ಪರಿಶೀಲಿಸಲಿದ್ದಾರೆ. ಪ್ರಮುಖವಾಗಿ ವ್ಯಾಪಾರ, ರಕ್ಷಣೆ, ಭದ್ರತೆ, ಅರೆವಾಹಕಗಳು, ಡಿಜಿಟಲ್ ತಂತ್ರಜ್ಞಾನ ಮತ್ತು ನವೀಕರಿಸಬಹುದಾದ ಇಂಧನದಂತಹ ಆದ್ಯತೆಯ ಕ್ಷೇತ್ರಗಳು ಇದರಲ್ಲಿ ಒಳಗೊಂಡಿವೆ ಎಂದು ಮಾಹಿತಿ ನೀಡಿದರು.

<><><><>

ಅಮೃತ್ ಭಾರತ್ ಯೋಜನೆಯಡಿಯಲ್ಲಿ ೧೭೦ ರೈಲು ನಿಲ್ದಾಣಗಳ ಪುನರಾಭಿವೃದ್ಧಿ ಕಾರ್ಯ ಪೂರ್ಣಗೊಂಡಿದೆ ಎಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ರಾಜ್ಯಸಭೆಯಲ್ಲಿಂದು ಪೂರಕ ಪ್ರಶ್ನೆಗಳಿಗೆ ಉತ್ತರಿಸಿದ ಅವರು, ಈ ಯೋಜನೆಯಡಿಯಲ್ಲಿ ಒಂದು ಸಾವಿರದ ೨೦೦ಕ್ಕೂ ಹೆಚ್ಚು ನಿಲ್ದಾಣಗಳನ್ನು ಅಭಿವೃದ್ಧಿಗಾಗಿ ಗುರುತಿಸಲಾಗಿದೆ. ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ರೈಲ್ವೆ ವಲಯದಲ್ಲಿ ಪ್ರಮುಖ ಪರಿವರ್ತನೆಯಾಗುತ್ತಿದೆ ಎಂದು ಅವರು ಹೇಳಿದರು. ಸರ್ಕಾರವು ಪ್ರಯಾಣಿಕರ ಸುರಕ್ಷತೆ ಮತ್ತು ಅವರಿಗೆ ಸೌಕರ್ಯಗಳನ್ನು ಸೃಷ್ಟಿಸುವತ್ತ ಗಮನಹರಿಸುತ್ತಿದೆ. ಕೇರಳದಲ್ಲಿ ರೈಲ್ವೆಗೆ ನಿಧಿ ಹಂಚಿಕೆ ಕುರಿತ ಪ್ರಶ್ನೆಗೆ ಉತ್ತರಿಸಿದ ಅವರು, ಈ ವರ್ಷದ ಕೇಂದ್ರ ಬಜೆಟ್‌ನಲ್ಲಿ ಮೂರು ಸಾವಿರದ ೭೯೫ ಕೋಟಿ ರೂಪಾಯಿಗಳನ್ನು ನಿಗದಿಪಡಿಸಲಾಗಿದೆ, ಇದು ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಮಾಡಿದ ಹಂಚಿಕೆಗಿಂತ ಹತ್ತು ಪಟ್ಟು ಹೆಚ್ಚಾಗಿದೆ ಎಂದು ಹೇಳಿದರು. ರೈಲು ಜಾಲದ ಸಾಮರ್ಥ್ಯವನ್ನು ದ್ವಿಗುಣಗೊಳಿಸುವ ವಿವಿಧ ರೈಲ್ವೆ ಯೋಜನೆಗಳಲ್ಲಿ ಸರ್ಕಾರ ಕೆಲಸ ಮಾಡುತ್ತಿದೆ. ರೈಲ್ವೆ ಯೋಜನೆಗಳು ಸಮಯಕ್ಕೆ ಸರಿಯಾಗಿ ಪೂರ್ಣಗೊಳ್ಳುವಂತೆ ಭೂಸ್ವಾಧೀನ ಕಾರ್ಯವನ್ನು ತ್ವರಿತಗೊಳಿಸುವಂತೆ ಸಚಿವರು ಕೇರಳ ಸರ್ಕಾರಕ್ಕೆ ಮನವಿ ಮಾಡಿದರು. ಈ ವರ್ಷ ಪಂಜಾಬ್‌ಗೆ ಐದು ಸಾವಿರದ ೬೭೨ ಕೋಟಿ ರೂಪಾಯಿಗಳನ್ನು ಹಂಚಿಕೆ ಮಾಡಲಾಗಿದೆ, ಇದು ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಮಾಡಿದ ಹಂಚಿಕೆಗಿಂತ ೨೫ ಪಟ್ಟು ಹೆಚ್ಚಾಗಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದರು.

<><><><>

ಭಾರತ-ಯುರೋಪಿಯನ್ ಒಕ್ಕೂಟ ಮುಕ್ತ ವ್ಯಾಪಾರ ಒಪ್ಪಂದವು ಎರಡೂ ಕಡೆಯವರಿಗೆ ಒಂದು ಬದಲಾವಣೆ ತರುವ ಬೆಳವಣಿಗೆಯಾಗಿದೆ ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಹೇಳಿದ್ದಾರೆ.

<><><><>

ಜಿಂಬಾಬ್ವೆಯ ಹರಾರೆಯಲ್ಲಿ ನಡೆಯುತ್ತಿರುವ ಹತ್ತೊಂಭತ್ತು ವರ್ಷದೊಳಗಿನವರ ವಿಶ್ವಕಪ್ ಕ್ರಿಕೆಟ್‌ನಲ್ಲಿಂದು ಭಾರತ ಮತ್ತು ಇಂಗ್ಲೆಂಡ್ ಮುಖಾಮುಖಿಯಾಗಿವೆ. ಟಾಸ್ ಗೆದ್ದ ಭಾರತ ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿದೆ.

<><><><>

ಚೀನಾದ ಕ್ವಿಂಗ್‌ಡಾವೊದಲ್ಲಿ ಇಂದು ನಡೆದ ಬ್ಯಾಡ್ಮಿಂಟನ್ ಏಷ್ಯಾ ತಂಡ ಚಾಂಪಿಯನ್‌ಶಿಪ್‌ನ ಕ್ವಾರ್ಟರ್ ಫೈನಲ್‌ನಲ್ಲಿ ಚೀನಾ ವಿರುದ್ಧ ೦-೩ ಅಂತರದಲ್ಲಿ ಭಾರತದ ಮಹಿಳಾ ತಂಡ ಪರಾಭವಗೊಂಡಿದೆ. ಭಾರತೀಯ ಪುರುಷರ ತಂಡವು ಕ್ವಾರ್ಟರ್ ಫೈನಲ್‌ನಲ್ಲಿ ದಕ್ಷಿಣ ಕೊರಿಯಾವನ್ನು ಎದುರಿಸಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>